ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: www.kptcl.com
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521
(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009)

ಸಂಖ್ಯೆ: ಕವಿಪ್ರನಿನಿ/ಬಿ14/6014/2002-03 ದಿನಾಂಕ: 23 JAN 2019

## ಸುತ್ತೋಲೆ

**ವಿಷಯ:** ನಿಗಮದಲ್ಲಿನ ವಿದ್ಯುತ್ ಕೇಂದ್ರಗಳ ಪಾಳಿ ಕೆಲಸ ಕಾರ್ಯಗಳನ್ನು ಮ್ಯಾನ್ ಪವರ್ ಏಜನ್ಸಿಗಳ ಮೂಲಕ ನಿರ್ವಹಿಸುವ ಬಗ್ಗೆ.

**ಉಲ್ಲೇಖ:**
1. ಉಪ ಪ್ರಧಾನ ವ್ಯವಸ್ಥಾಪಕರು(ತಾಂತ್ರಿಕ), ಕವಿಪ್ರನಿನಿ ರವರ ಪತ್ರ ಸಂಖ್ಯೆ: ಕವಿಪ್ರನಿನಿ/ಔಬಾ/ಬಿ14/6014/2002-03 ದಿನಾಂಕ: 20.07.2015.
2. ಉಪ ಪ್ರಧಾನ ವ್ಯವಸ್ಥಾಪಕರು(ತಾಂತ್ರಿಕ), ಕವಿಪ್ರನಿನಿ ರವರ ಪತ್ರ ಸಂಖ್ಯೆ: ಕವಿಪ್ರನಿನಿ/ಔಬಾ/ಬಿ14/6014/2002-03 ದಿನಾಂಕ: 08.09.2015.
3. ದಿನಾಂಕ: 09.11.2018 ರಂದು ಕವಿಪ್ರನಿನಿಯ ವಿದ್ಯುತ್ ಉಪಕೇಂದ್ರಗಳ ಪಾಳಿ ಮತ್ತು ನಿರ್ವಹಣೆಗೆ ಸಂಬಂಧಿಸಿದಂತೆ, ಮಾನ್ಯ ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡಾವಳಿ.
4. ಉಪ ಪ್ರಧಾನ ವ್ಯವಸ್ಥಾಪಕರು(ತಾಂತ್ರಿಕ), ಕವಿಪ್ರನಿನಿ ರವರ ಟಿಪ್ಪಣಿ ಸಂಖ್ಯೆ: ಬಿ14/6014/2002-03 ದಿನಾಂಕ: 28.12.2018.

******

ಕವಿಪ್ರನಿನಿ ವ್ಯಾಪ್ತಿಯಲ್ಲಿನ ವಿವಿಧ ವಿದ್ಯುತ್ ಕೇಂದ್ರಗಳ ಪಾಳಿ ಕೆಲಸ ಕಾರ್ಯಗಳನ್ನು ಖಾಯಂ ನೌಕರರ ಕೊರತೆಯಿಂದ ವಿದ್ಯುತ್ ಗುತ್ತಿಗೆದಾರ ದರ್ಜೆ-1 ಮತ್ತು ಸೂಪರ್ ಗ್ರೇಡ್ ವಿದ್ಯುತ್ ಗುತ್ತಿಗೆ ಪರವಾನಗಿ ಹೊಂದಿರುವ ಗುತ್ತಿಗೆದಾರರ ಮೂಲಕ ನಿರ್ವಹಿಸಲು ಉಲ್ಲೇಖಿತ ಪತ್ರಗಳಲ್ಲಿ ಸೂಚಿಸಲಾಗಿದೆ. ಈ ವಿಷಯಕ್ಕೆ ಸಂಬಂಧಿಸಿದಂತೆ **ದಿನಾಂಕ: 09.11.2018** ರಂದು ಮಾನ್ಯ ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಇನ್ನು ಮುಂದೆ ನಿಗಮದಲ್ಲಿನ ವಿವಿಧ ವಿದ್ಯುತ್ ಕೇಂದ್ರಗಳ ಪಾಳಿ ಕೆಲಸ ಕಾರ್ಯಗಳ ಸೇವೆಯನ್ನು ಮ್ಯಾನ್ ಪವರ್ ಏಜೆನ್ಸಿಗಳ ಮೂಲಕ ಕೆ.ಟಿ.ಪಿ.ಪಿ ಕಾಯ್ದೆಯನ್ವಯ ಟೆಂಡರ್ ಕರೆದು ಪಡೆಯಬೇಕಿರುತ್ತದೆ.

ಆದ್ದರಿಂದ, ಕೆ.ಟಿ.ಪಿ.ಪಿ ಕಾಯ್ದೆಯನ್ವಯ ಮ್ಯಾನ್ ಪವರ್ ಏಜೆನ್ಸಿಗಳ ಮೂಲಕ ಸೇವೆ ಪಡೆಯಲು ಟೆಂಡರ್ ಪ್ರಕ್ರಿಯೆಗೊಳಪಡಿಸುವಾಗ ಈ ಕೆಳಕಂಡ ಅಂಶಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಸೂಚಿಸಿದೆ:-

1. ಹೊರ ಗುತ್ತಿಗೆ ಸಿಬ್ಬಂದಿಗಳಿಗೆ ಕನಿಷ್ಠ ವೇತನ ಕಾಯ್ದೆಯನ್ವಯ ಕರ್ನಾಟಕ ಸರ್ಕಾರದ ಕಾರ್ಮಿಕ ಇಲಾಖೆ ಕಾಲಕಾಲಕ್ಕೆ ನಿಗದಿಪಡಿಸುವ ಕನಿಷ್ಠ ವೇತನ ಅಥವಾ ನಿಗಮವು ನಿಗದಿಪಡಿಸುವ ಕನಿಷ್ಠ ವೇತನ, ಇವೆರಡರಲ್ಲಿ ಯಾವುದು ಹೆಚ್ಚು, ಆ ಮೊತ್ತವನ್ನು ಪರಿಗಣಿಸುವುದು.
2. ಮ್ಯಾನ್ ಪವರ್ ಏಜೆನ್ಸಿ ರವರು ಕಡ್ಡಾಯವಾಗಿ ಇ.ಪಿ.ಎಫ್ ಹಾಗೂ ಇ.ಎಸ್.ಐ ನಲ್ಲಿ ನೋಂದಾಯಿತರಾಗಿರಬೇಕು.
3. ಮ್ಯಾನ್ ಪವರ್ ಏಜೆನ್ಸಿ ರವರು ಒದಗಿಸುವ ಹೊರ ಗುತ್ತಿಗೆ ಸಿಬ್ಬಂದಿಗಳ ಕನಿಷ್ಠ ವಯೋಮಿತಿ 18 ವರ್ಷ ಹಾಗೂ ಗರಿಷ್ಠ ವಯೋಮಿತಿ 50 ವರ್ಷಗಳನ್ನು ಮೀರಿರಬಾರದು ಹಾಗೂ ದೈಹಿಕವಾಗಿ ಸದೃಢರಾಗಿರಬೇಕು.

4. ಪ್ರತಿ ತಿಂಗಳ 7ನೇ ತಾರೀಖಿನೊಳಗಾಗಿ ನಿಗದಿಪಡಿಸಿರುವ ಸಂಭಾವನೆಯನ್ನು ಹೊರಗುತ್ತಿಗೆ ಸಿಬ್ಬಂದಿಗಳ ವೈಯಕ್ತಿಕ ಬ್ಯಾಂಕ್ ಖಾತೆಗೆ ಕಡ್ಡಾಯವಾಗಿ ಜಮೆ ಮಾಡಬೇಕು ಮತ್ತು ಪ್ರತಿ ತಿಂಗಳು ವೇತನ ಚೀಟಿಯನ್ನು ಕಡ್ಡಾಯವಾಗಿ ನೀಡಬೇಕು.
5. ಹೊರಗುತ್ತಿಗೆ ಸಿಬ್ಬಂದಿಗಳಿಗೆ ಮ್ಯಾನ್ ಪವರ್ ಏಜೆನ್ಸಿಗಳು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ವಿತರಿಸಿರಬೇಕು ಹಾಗೂ ಹೊರಗುತ್ತಿಗೆ ಕೆಲಸಗಾರರು ಅದನ್ನು ಕೆಲಸದ ವೇಳೆಯಲ್ಲಿ ಧರಿಸಿರಬೇಕು.
6. ಮ್ಯಾನ್ ಪವರ್ ಏಜೆನ್ಸಿಗಳು ನಿಯೋಜಿಸುವ ಹೊರ ಗುತ್ತಿಗೆ ಸಿಬ್ಬಂದಿಗಳ ವಿಳಾಸ, ಭಾವಚಿತ್ರ, ಇ.ಪಿ.ಎಫ್ ಹಾಗೂ ಇ.ಎಸ್.ಐ ಅಕೌಂಟ್ ಸಂಖ್ಯೆಗಳನ್ನು ಅವಾರ್ಡ್ ಪಡೆಯುವ ಮೊದಲು ನಿಗಮದ ಸಂಬಂಧಪಟ್ಟ ಕಚೇರಿಗಳಿಗೆ ಒದಗಿಸಬೇಕು.
7. ಹೊರ ಗುತ್ತಿಗೆ ಸಿಬ್ಬಂದಿಗಳಿಗೆ ಕರ್ತವ್ಯ ನಿರತ ಅವಧಿಯಲ್ಲಿ ಅಪಘಾತ ಅಥವಾ ಪ್ರಾಣಾಪಾಯ ಆಕಸ್ಮಿಕ ಘಟನೆಗಳು ಸಂಭವಿಸಿದಲ್ಲಿ ಸಂಬಂಧಪಟ್ಟ ಮ್ಯಾನ್ ಪವರ್ ಏಜೆನ್ಸಿಗಳು ನಿಯಮಾನುಸಾರ ಪಿ.ಎಫ್ ಮತ್ತು ಇ.ಎಸ್.ಐ ಸಂಸ್ಥೆಗಳಿಂದ ಅಗತ್ಯ ಪರಿಹಾರ ಒದಗಿಸಬೇಕು. ನಿಗಮದ ಆಸ್ತಿ-ಪಾಸ್ತಿಗೆ ಏಜೆನ್ಸಿಗಳಿಂದ ನಿಯೋಜಿತರಾಗುವ ಸಿಬ್ಬಂದಿಗಳಿಂದ ಹಾನಿ ಉಂಟಾದಲ್ಲಿ ಇದರ ನಷ್ಟವನ್ನು ಏಜೆನ್ಸಿಗಳೇ ಭರಿಸಲು ಜವಾಬ್ದಾರರಾಗಿರುತ್ತಾರೆ.
8. ಕಾರ್ಮಿಕ ವಿವಾದ ಕಾಯ್ದೆ-1947 ರಂತೆ ಹೊರಗುತ್ತಿಗೆ ಸಿಬ್ಬಂದಿಗಳ ಸೇವೆಯನ್ನು ನಿರಂತರವಾಗಿ 240 ದಿನಗಳಿಗೆ ಸ್ಥಗಿತಗೊಳಿಸಿ ಅವರುಗಳನ್ನು ಸೇವೆಯಿಂದ ಕಡ್ಡಾಯವಾಗಿ ಬಿಡುಗಡೆಗೊಳಿಸಬೇಕು. ಸೇವೆಯಿಂದ ಬಿಡುಗಡೆಗೊಂಡ ಹೊರ ಗುತ್ತಿಗೆ ಸಿಬ್ಬಂದಿಗಳ ಸ್ಥಳಗಳಿಗೆ ಏಜೆನ್ಸಿಗಳು ಬದಲಿ ಹೊರ ಗುತ್ತಿಗೆ ಸಿಬ್ಬಂದಿಗಳ ಸೇವೆಯನ್ನು ಒದಗಿಸಬೇಕು.
9. ಕಾರ್ಮಿಕ ಕಾನೂನಿನ ಅಡಿಯಲ್ಲಿನ ಕಾಯ್ದೆಗಳಾದ ಇ.ಪಿ.ಎಫ್. ಇ.ಎಸ್.ಐ. ಕನಿಷ್ಠ ವೇತನ, ಗ್ರಾಚ್ಯುಟಿ ಹಾಗೂ ಇತರೆ ಕಾಯ್ದೆಗಳನ್ನು ಕಡ್ಡಾಯವಾಗಿ ಪಾಲಿಸಲು ಏಜೆನ್ಸಿಗಳು ನಿಗಮದೊಂದಿಗೆ ಒಪ್ಪಂದ ಮಾಡಿಕೊಳ್ಳಬೇಕು.

ಈಗಾಗಲೇ ಹೊರ ಗುತ್ತಿಗೆ ಮೂಲಕ ವಿದ್ಯುತ್ ಕೇಂದ್ರಗಳ ಪಾಳಿ ಕೆಲಸ ಕಾರ್ಯಗಳಿಗಾಗಿ ಹೊರಡಿಸಿರುವ ಟೆಂಡರ್ ಪ್ರಕಟಣೆ/ಪ್ರಕ್ರಿಯೆಗಳ ವಿರುದ್ಧ ಮಾನ್ಯ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳು ಇತ್ಯರ್ಥವಾಗುವವರೆಗೆ ಹೊಸದಾಗಿ ಟೆಂಡರ್‌ಗಳನ್ನು ಕರೆಯದಂತೆ ಹಾಗೂ ಬಾಕಿ ಇರುವ ಪ್ರಕರಣಗಳು ಇತ್ಯರ್ಥವಾದ ಕೂಡಲೇ ಮ್ಯಾನ್ ಪವರ್ ಏಜೆನ್ಸಿಗಳ ಮೂಲಕ ಹೊರಗುತ್ತಿಗೆ ಸೇವೆಗಾಗಿ ಟೆಂಡರ್ ಕರೆಯಲು ಕ್ರಮವಹಿಸುವಂತೆ ಸೂಚಿಸಿದೆ.

ಟೆಂಡರ್ ಪ್ರಕ್ರಿಯೆಗೆ ಸಂಬಂಧಪಟ್ಟ ಮಾರ್ಗದರ್ಶನವನ್ನು ಉಪ ಪ್ರಧಾನ ವ್ಯವಸ್ಥಾಪಕರು(ತಾಂತ್ರಿಕ), ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು ಇವರ ಕಚೇರಿಯಿಂದ ಸದ್ಯದಲ್ಲಿಯೇ ಜಾರಿಗೊಳಿಸಲಾಗುವುದು.

ನಿರ್ದೇಶಕರು(~~ಆಡಳಿತ ಮತ್ತು~~ ಮಾ.ಸಂ),
ಕವಿಪ್ರನಿನಿ.

<u>ಪ್ರತಿಯನ್ನು:-</u>

1. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ.
2. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ.
3. ಎಲ್ಲಾ ಲೆಕ್ಕ ನಿಯಂತ್ರಣಾಧಿಕಾರಿಗಳು, ಪ್ರಸರಣ ವಲಯ/ಎಸ್.ಎಲ್.ಡಿ.ಸಿ, ಕವಿಪ್ರನಿನಿ.
4. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಪ್ರಸರಣ)/(ಹಣಕಾಸು)/(ಆಡಳಿತ ಮತ್ತು ಮಾ.ಸಂ)/ ನಿರ್ದೇಶಕರು ಮತ್ತು ಕಂಪನಿ ಕಾರ್ಯದರ್ಶಿ, ಕವಿಪ್ರನಿನಿ ಇವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.

**ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ <u>www.kptcl.com/eprasarana</u> ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆ.**

1. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಪ್ರಸರಣ (ಕಾ ಮತ್ತು ನಿ)ವೃತ್ತ, ಕವಿಪ್ರನಿನಿ.
2. ಎಲ್ಲಾ ಉಪಲೆಕ್ಕನಿಯಂತ್ರಣಾಧಿಕಾರಿ, ಪ್ರಸರಣ (ಕಾ ಮತ್ತು ನಿ)ವೃತ್ತ, ಕವಿಪ್ರನಿನಿ.
3. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಟಿ.ಎಲ್ ಮತ್ತು ಎಸ್.ಎಸ್. ವಿಭಾಗ, ಕವಿಪ್ರನಿನಿ

<u>ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-</u>

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು ಕವಿಪ್ರನಿನಿ ನೌಕರರ ಸಂಘ (ನೋಂದಣಿ ಸಂಖ್ಯೆ:659), ಬೆಂಗಳೂರು ಮತ್ತು ನಿರ್ದೇಶಕರು ಎಲ್ಲಾ ಎಸ್ಕಾಂಗಳು.
2. ಶ್ರೀ.ಎ.ಎನ್.ಜಯರಾಜ್, ಅಧ್ಯಕ್ಷರು, ಕವಿಮಂ ಇಂಜನಿಯರ್‌ಗಳ ಸಂಘ, ಬೆಂಗಳೂರು ಮತ್ತು ನಿರ್ದೇಶಕರು ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ(ನೋಂ.ಸಂ.659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಇಂಜನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಧಿಕಾರಿಗಳ ಸಂಘ, ಬೆಂಗಳೂರು.